## ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ ರವರು ನಿಯಮ 72 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಕರಡು ಉತ್ತರ

**ಪ್ರಶ್ನೆ:** ರಾಜ್ಯದ ಅಡಿಕೆ ಬೆಳೆಯುವ ಬಹುತೇಕ ಪ್ರದೇಶಗಳಲ್ಲಿ ಎಲೆ ಚುಕ್ಕಿ ಮತ್ತು ಹಳದಿ ರೋಗ ಕಾಣಿಸಿಕೊಂಡಿದ್ದು, ಬೆಳೆಗಾರರನ್ನು ಕಂಗಾಲು ಮಾಡಿದೆ. ಸದರಿ ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯನ್ನು ವೈಜ್ಞಾನಿಕವಾಗಿ ನಿಯಂತ್ರಿಸಲು ಮತ್ತು ಹಾನಿಗೀಡಾಗಿರುವ ಅಡಿಕೆ ತೋಟಗಳ ಪುನಶ್ಚೇತನಕ್ಕೆ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳದೇ ಇರುವುದರಿಂದ ಹಾಗೂ ಸಕಾಲದಲ್ಲಿ ಅಡಿಕೆ ಬೆಳೆಗಾರರ ನೆರವಿಗೆ ಸರ್ಕಾರ ಸ್ಪಂದಿಸದೇ ಇರುವುದರಿಂದ, ಅಡಿಕೆ ಬೆಳೆಗಾರರು ತೀವ್ರ ಸಂಕಷ್ಟಕ್ಕೀಡಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ:** ಕರ್ನಾಟಕ ರಾಜ್ಯದಲ್ಲಿ 6.14 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಯನ್ನು ಬೆಳೆಯಲಾಗುತ್ತಿದ್ದು, 9.33 ಲಕ್ಷ ಮೆ.ಟನ್ ಉತ್ಪಾದನೆ ಮಾಡಲಾಗುತ್ತಿದೆ. ರಾಜ್ಯದ ಅಡಿಕೆ ಬೆಳೆಯುವ ಪ್ರದೇಶದಲ್ಲಿ ಎಲೆ ಚುಕ್ಕೆ ರೋಗವು ಅಂದಾಜು 53977 ಹೆಕ್ಟೇರ್ ಪ್ರದೇಶದಲ್ಲಿ ಕಂಡುಬಂದಿರುತ್ತದೆ. ಚಿಕ್ಕಮಗಳೂರು-28788 ಹೆಕ್ಟೇರ್, ಶಿವಮೊಗ್ಗ-11950 ಹೆಕ್ಟೇರ್, ಉತ್ತರ ಕನ್ನಡ-8604 ಹೆಕ್ಟೇರ್, ದಕ್ಷಿಣ ಕನ್ನಡ-3623 ಹೆಕ್ಟೇರ್, ಹಾಸನ-360 ಹೆಕ್ಟೇರ್, ಕೊಡಗು-529 ಹೆಕ್ಟೇರ್ ಹಾಗೂ ಉಡುಪಿ-123 ಹೆಕ್ಟೇರ್ ಜಿಲ್ಲೆಗಳಲ್ಲಿ ಅಡಿಕೆ ತೋಟಗಳು ಬಾಧಿತವಾಗಿರುತ್ತವೆ.

ಅಡಿಕೆ ಹಳದಿ ಎಲೆ ರೋಗವು ಒಟ್ಟು 13767 ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಯನ್ನು ಬಾಧಿಸುತ್ತಿದೆ. ಚಿಕ್ಕಮಗಳೂರು-9625 ಹೆಕ್ಟೇರ್, ಕೊಡಗು- 2142 ಹೆಕ್ಟೇರ್ ಮತ್ತು ದಕ್ಷಿಣ ಕನ್ನಡ ಜಿಲ್ಲೆ- 2000 ಹೆಕ್ಟೇರ್ ಪ್ರದೇಶದಲ್ಲಿ ಹಳದಿ ಎಲೆ ರೋಗವು ಕಂಡುಬಂದಿರುತ್ತದೆ.

ಅಡಿಕೆ ಎಲೆ ಚುಕ್ಕೆ ಹಾಗೂ ಹಳದಿ ಎಲೆ ರೋಗದ ಬಾಧೆಯನ್ನು ವೈಜ್ಞಾನಿಕವಾಗಿ ನಿಯಂತ್ರಿಸಲು ಹಾಗೂ ಹಾನಿಗೀಡಾಗಿರುವ ಅಡಿಕೆ ತೋಟಗಳ ಪುನಶ್ಚೇತನಕ್ಕೆ ಇಲಾಖಾ ವತಿಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ.

**ಎಲೆಚುಕ್ಕೆ ರೋಗ:**

1. ಅಡಿಕೆ ಬೆಳೆಗಾರರಿಗೆ ಎಲೆ ಚುಕ್ಕೆ ರೋಗದ ನಿಯಂತ್ರಣೆಗಾಗಿ ಪ್ರತಿ ಫಲಾನುಭವಿಗೆ ಪ್ರತಿ ಹೆಕ್ಟೇರ್ ಗೆ ರೂ.4000.00 ಗಳಂತೆ 1.5 ಹೆಕ್ಟೇರ್ ವರೆಗೆ ರೂ.6000/- ಮೊತ್ತದ ಸಸ್ಯ ಸಂರಕ್ಷಣಾ ಔಷಧಿಗಳನ್ನು ನೀಡಲಾಗುತ್ತಿದೆ. ಈ ಕಾರ್ಯಕ್ರಮದಡಿ 2023-24ನೇ ಸಾಲಿನಲ್ಲಿ 6250 ಹೆಕ್ಟೇರ್ ಪ್ರದೇಶಕ್ಕೆ ರೂ. 250.00ಲಕ್ಷ ವಿನಿಯೋಗಿಸಿ ಸಸ್ಯ ಸಂರಕ್ಷಣಾ ಔಷಧಿಗಳನ್ನು ಉಚಿತವಾಗಿ ನೀಡಲಾಗಿರುತ್ತದೆ.

2. ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣೆ ಕುರಿತು ಸಂಶೋಧನೆ ಕೈಗೊಳ್ಳಲು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ರವರಿಗೆ ಪ್ರಸಕ್ತ ಸಾಲಿನಲ್ಲಿ ರೂ.43.61 ಲಕ್ಷಗಳ ಅನುದಾನವನ್ನು ನೀಡಲಾಗಿದ್ದು, ಸಂಶೋಧನೆಯು ಪ್ರಗತಿಯಲ್ಲಿರುತ್ತದೆ.

3. ಅಡಿಕೆ ಬೆಳೆಗಾರರಿಗೆ ಅಡಿಕೆ ಬೆಳೆಯ ಕಟಾವು ಹಾಗೂ ಸಿಂಪರಣೆಗಾಗಿ(ದೋಟಿ) ಖರೀದಿಸಲು ಕೃಷಿ ಯಾಂತ್ರೀಕರಣ ಯೋಜನೆಯಡಿ ಸಾಮಾನ್ಯ ವರ್ಗದವರಿಗೆ ಶೇ.40 ರಷ್ಟು ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ.50 ರಂತೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ 1265 ಫಲಾನುಭವಿಗಳಿಗೆ ಈವರೆಗೂ ರೂ.396.17 ಲಕ್ಷಗಳ ಸಹಾಯಧನ ನೀಡಲಾಗಿದೆ.

4. ಪ್ರಮುಖ ಅಡಿಕೆ ಬೆಳೆಯುವ ಜಿಲ್ಲೆಗಳಲ್ಲಿ ಒಟ್ಟು 53977 ಹೆಕ್ಟೇರ್ ಪ್ರದೇಶದಲ್ಲಿ ಎಲೆ ಚುಕ್ಕೆ ರೋಗದ ನಿಯಂತ್ರಣೆಗೆ ರೂ. 21.50 ಕೋಟಿಗಳ ಅನುದಾನದ ಅವಶ್ಯಕತೆಯಿದ್ದು, ಈ ಸಂಬಂದಿತ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.

5. ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣೆಗೆ ಅಗತ್ಯವಿರುವ ಸಸ್ಯ ಸಂರಕ್ಷಣಾ ಔಷಧಿಗಳು ಹಾಗೂ ಸಿಂಪರಣೆ ವೆಚ್ಚ, ತೋಟಗಳ ನೈರ್ಮಲೀಕರಣ ಹಾಗೂ ಪೋಷಕಾಂಶಗಳ ನಿರ್ವಹಣೆ ಕುರಿತಾದ ಅರಿವು ಮೂಡಿಸುವ ಕಾರ್ಯಕ್ರಮಗಳು, ಉತ್ತಮ ತೋಟಗಾರಿಕೆ ಬೇಸಾಯ ಪದ್ಧತಿಗಳ ಅಳವಡಿಕೆ, ಪ್ರಾತ್ಯಕ್ಷತೆಗಳು ಇತ್ಯಾದಿಗಳಿಗಾಗಿ ರೂ. 225.73 ಕೋಟಿಗಳ ಪ್ರಸ್ತಾವನೆಯನ್ನು ರೂಪಿಸಿ ಕೇಂದ್ರ ಸಂಸ್ಥೆಯಾದ CPCRI ಕಾಸರಗೋಡು ರವರ ಮೂಲಕ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಈ ಪ್ರಸ್ತಾವನೆಯ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲುದಾರಿಕೆ ಮತ್ತು ವರ್ಷವಾರು ಅನುದಾನದ ಹಂಚಿಕೆ ಕುರಿತು ಕೇಂದ್ರ ಸರ್ಕಾರವು ಮಾಹಿತಿಯನ್ನು ಕೋರಿದ್ದು, ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.

6. ರೋಗದ ನಿಯಂತ್ರಣೆಯ ಕುರಿತು ರಾಷ್ಟ್ರೀಯ ವಿಜ್ಞಾನಿಕ ಸಮಿತಿ ಹಾಗೂ ಇಲಾಖಾ ಅಧಿಕಾರಿಗಳು ಅಡಿಕೆ ಎಲೆಚುಕ್ಕೆ ರೋಗ ಬಾಧಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಹಾರೋಪಾಯಗಳನ್ನು ಹಾಗೂ ಪ್ರಾತ್ಯಕ್ಷತೆಗಳನ್ನು ಕೈಗೊಳ್ಳಲಾಗಿರುತ್ತದೆ.

**ಅಡಿಕೆ ಹಳದಿ ಎಲೆ ರೋಗ:**

1. ಪರ್ಯಾಯ ಬೆಳೆಗಳನ್ನು ಬೆಳೆಸಲು: ತೋಟಗಾರಿಕೆ ಇಲಾಖೆಯ ಸಮಗ್ರ ತೋಟಗಾರಿಕೆ ಅಭಿವೃದ್ದಿ ಯೋಜನೆಯಡಿ ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ತೋಟಗಾರಿಕೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳುಮೆಣಸು, ಜಾಯಿ ಕಾಯಿ, ಬೆಣ್ಣೆಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು ಆಯಾ ಬೆಳೆಗೆ ಅನುಗುಣವಾಗಿ ಶೇ.40ರಷ್ಟು ಪ್ರತಿ ಹೆಕ್ಟೇರ್ ಗೆ ರೂ.11952 ರಿಂದ ರೂ.123483 ವರೆಗೆ ಸಹಾಯಧನವನ್ನು 4 ಹೆಕ್ಟೇರ್ ವರೆಗೆ ನೀಡಲಾಗಿದೆ. 2022-23 ನೇ ಸಾಲಿನಲ್ಲಿ 812 ಹೆಕ್ಟೇರ್ ಪ್ರದೇಶಕ್ಕೆ 1328 ಫಲಾನುಭವಿಗಳಿಗೆ ರೂ.488 ಲಕ್ಷಗಳ ಸಹಾಯಧನ ನೀಡಲಾಗಿದೆ.

2. ಪರ್ಯಾಯ ಬೆಳೆಗಳ ನಿರ್ವಹಣೆ: ಮೊದಲನೇ ವರ್ಷದ ಆಯಾ ಬೆಳೆಗೆ ಅನುಗುಣವಾಗಿ ನಿರ್ವಹಣೆಯ ಶೇ.50 ರಷ್ಟು ಪ್ರತಿ ಹೆಕ್ಟೇರ್ ಗೆ ರೂ.2509 ರಿಂದ ರೂ.18017 ವರೆಗೆ ಸಹಾಯಧನವನ್ನು 4 ಹೆಕ್ಟೇರ್ ವರೆಗೆ ನೀಡಲಾಗುತ್ತಿದೆ. ರಾಜ್ಯದಲ್ಲಿ 2023-24 ನೇ ಸಾಲಿನಲ್ಲಿ 581.56 ಹೆಕ್ಟೇರ್ ನಿರ್ವಹಣೆಗೆ 586 ಫಲಾನುಭವಿಗಳಿಗೆ ರೂ. 64.55 ಲಕ್ಷ ಸಹಾಯಧನ ನೀಡಲಾಗುತ್ತಿದೆ.

3. ಇಲಾಖಾ ವತಿಯಿಂದ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ವಿಶ್ವವಿದ್ಯಾಲಯದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗಿದೆ.

4. ಈ ರೋಗ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ ಅನುದಾನ ಒದಗಿಸಿದ್ದು, ಸಂಶೋಧನೆ ಪ್ರಗತಿಯಲ್ಲಿರುತ್ತದೆ.

5. ಸದರಿ ರೋಗಗಳಿಂದ ಬಾಧಿತ ಅಡಿಕೆ ತೋಟಗಳ ಪುನಶ್ಚೇತನ MGNREGA ಯೋಜನೆಯ ಅಡಿಯಲ್ಲಿ ಮರುನಾಟಿ ಮಾಡಲು ರೂ.1,06,323 ರವರೆಗೆ ನೆರವು ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಈವರೆಗೆ 196.86 ಹೆಕ್ಟೇರ್ ಪ್ರದೇಶಕ್ಕೆ 1497 ಫಲಾನುಭವಿಗಳಿಗೆ ರೂ.382.86 ಲಕ್ಷಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.

HORTI 68 HGM 2024

(ಎಸ್.ಎಸ್.ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ,
ತೋಟಗಾರಿಕೆ ಸಚಿವರು